# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ
# ಉತ್ತರ ಕನ್ನಡ : ಕಾರವಾರ

**ಎಸ್.ಸಿ. ನಂ.10/2019**

**ದೋ.ಸಾ. : 6 ಫ್ರಾ.ಸಾ. : 18**

| | | |
|---|---|---|
| ಸಾಕ್ಷಿಯ ಹೆಸರು | : | ನಾರಾಯಣ ನಾಗಪ್ಪ ಹರಿಕಂತ್ರ |
| ತಂದೆಯ ಹೆಸರು | : | ನಾಗಪ್ಪ ಹರಿಕಂತ್ರ |
| ವಯಸ್ಸು | : | 32 ವರ್ಷ |
| ಕೆಲಸ | : | ಸೆಕ್ಯೂರಿಟಿ ಗಾರ್ಡ್, ಕಾರವಾರ |
| ವಾಸ | : | ಹಾರವಾಡ, ಅಂಕೋಲಾ |

**ದಿನಾಂಕಃ 11-07-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ-**

1. ಸಾಕ್ಷಿಗೆ ಈಗ ತೋರಿಸಿದ ಮೋಟಾರು ಸೈಕಲ್ ಜಪ್ತು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಜಪ್ತುಪಂಚನಾಮೆಯನ್ನು ನಿಪಿ-49 ಎಂದು, ಸಾಕ್ಷಿಯ ಸಹಿಯನ್ನು ನಿಪಿ-49(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ತೋರಿಸಿದ ಫೋಟೊದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-50 ಎಂದು ಗುರುತಿಸಲಾಯಿತು. ಸದರಿ ಫೋಟೊದಲ್ಲಿ ತಾನು ಹಾಗೂ ಚಾಸಾ-5 ಬಾಲಕೃಷ್ಣ ಇರುವುದಾಗಿ ಗುರುತಿಸಿರುತ್ತಾರೆ ಹಾಗೂ ಬೈಕನ್ನು ನೋಡಿ ಗುರುತಿಸಿರುತ್ತಾರೆ. ಸುಮಾರು 5 ವರ್ಷಗಳ ಹಿಂದೆ ಕಾರವಾರದ ಪೊಲೀಸರು ನನ್ನನ್ನು ಮತ್ತು ಚಾಸಾ-5 ರವರನ್ನು ಪೊಲೀಸ್ ಠಾಣೆಗೆ ಪಂಚನಾಮೆಗೆ ಬರುವಂತೆ ಕರೆಸಿದ್ದರು. ಅದರಂತೆ, ನಾನು ಮತ್ತು ಚಾಸಾ-5 ರವರು ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ಪಂಚನಾಮೆಯನ್ನು ಮಾಡಿ, ಫೋಟೊ ತೆಗೆದಿರುತ್ತಾರೆ. ಪೊಲೀಸರು ಯಾವ ವಿಷಯಕ್ಕಾಗಿ ಪಂಚನಾಮೆಗೆ ಕರೆಸಿದ್ದರು ಎಂದು ನನಗೆ ಗೊತ್ತಿಲ್ಲ ಹಾಗೂ ಏನನ್ನು ಜಪ್ತುಪಡಿಸಿಕೊಂಡರು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸರಕಾರಿ ಅಭಿಯೋಜಕರಿಂದಃ**

2. ಪೊಲೀಸರು ಪಂಚನಾಮೆ ಮಾಡಿದ ದಿನಾಂಕಃ 29-10-2018 ಆಗಿತ್ತು ಎಂದರೆ ಸರಿ. ಆ ಸಮಯದಲ್ಲಿ ಚಾಸಾ-26 ರಮೇಶ ಲಮಾಣಿ ಎನ್ನುವವರು ನಿಪಿ-50 ರಲ್ಲಿ ಕಾಣುತ್ತಿರುವ ಬೈಕನ್ನು ತಂದು ಹಾಜರುಪಡಿಸಿ, ತಾನು ಸದರಿ ಬೈಕಿನ ಮಾಲೀಕನಿದ್ದು, ಅದನ್ನು ಗುನ್ನಾ ಸಮಯದಲ್ಲಿ 3 ನೇ ಆರೋಪಿಗೆ ನೀಡಿದ್ದೆ ಎಂದು ಹೇಳಿರುತ್ತಾನೆ ಎಂದರೆ ಸರಿಯಲ್ಲ. ಚಾಸಾ-26 ರವರು ಹಾಜರುಪಡಿಸಿದ ಬೈಕ್ ಬಜಾಜ್ ಕಂಪನಿಯದ್ದಾಗಿದ್ದು, ಅದರ ನೊಂದಣಿ ನಂ.ಕೆಎ-65/ಹೆಚ್-2843 ಆಗಿತ್ತು ಎಂದರೆ ನನಗೆ ಗೊತ್ತಿಲ್ಲ. ನಿಪಿ-49 ಜಪ್ತುಪಂಚನಾಮೆಯನ್ನು ಸಂಜೆ 6.30 ರಿಂದ 7.15 ರವರೆಗೆ ಮಾಡಿರುತ್ತಾರೆ ಎಂದರೆ ಸರಿ. ನನ್ನ ಸಮಕ್ಷಮ ಚಾಸಾ-26 ರವರು ಬೈಕನ್ನು ಹಾಜರುಪಡಿಸಿದ್ದು, ಅದನ್ನು ಪೊಲೀಸರು ನನ್ನ ಸಮಕ್ಷಮ ಜಪ್ತುಪಡಿಸಿಕೊಂಡಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎ.ಎ.ಎ. ವಕೀಲರಿಂದಃ-**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿತರ ಪರ ಶ್ರೀ ಎಲ್.ಎಸ್.ಕೆ. ವಕೀಲರಿಂದಃ-**

3. ಪೊಲೀಸರು ನನ್ನನ್ನು ಪಂಚನಾಮೆಗೆ ಕರೆಸಿದ್ದಾಗ ನಾನು ಬೈತ್‌ಕೋಲ್ ನಲ್ಲಿರುವ ನನ್ನ ಸಂಬಂಧಿಕರ ಮನೆಯಲ್ಲಿದ್ದೆ. ಪೊಲೀಸರು ಪಂಚನಾಮೆಗೆ ಬರುವಂತೆ ನನಗೆ ಫೋನ್ ಮಾಡಿದ್ದರು. ಫೋನ್ ಮಾಡಿದ್ದ ಪೊಲೀಸರ ಹೆಸರು ನನಗೆ ಹೇಳಲು ಬರುವುದಿಲ್ಲ. ಬೈತ್ ಕೋಲ್ ನಿಂದ ಪೊಲೀಸ್ ಠಾಣೆಗೆ 2 ಕಿ.ಮೀ. ದೂರವಿರುತ್ತದೆ. ಆ ದಿನ ನಾನು ಮತ್ತು ಚಾಸಾ-5 ರವರು ಒಟ್ಟಿಗೇ ಪೊಲೀಸ್ ಠಾಣೆಗೆ ಹೋಗಿರುತ್ತೇವೆ. ಪೊಲೀಸ್ ಠಾಣೆಗೆ ಹೋದಾಗ ಪಂಚನಾಮೆ ಬರೆಯಲು ನಾನು ಯಾವುದೇ ಮಾಹಿತಿ ನೀಡಿರುವುದಿಲ್ಲ.

ಪಂಚನಾಮೆಯಲ್ಲಿ ಏನು ಬರೆಯಲಾಗಿದೆ ಮತ್ತು ಯಾಕೆ ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ನಮಗೆ ನಿಲ್ಲಿಸಿ ಒಂದು ಫೋಟೋ ತೆಗೆದು ನಮ್ಮ ಸಹಿಯನ್ನು ಪಡೆದುಕೊಂಡರು ಎಂದರೆ ಸರಿ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿ.

**ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀ ಎಸ್.ವಿ.ಎನ್. ವಕೀಲರಿಂದಃ-**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 5 ನೇ ಆರೋಪಿ ಪರ ಶ್ರೀ ಎಸ್.ಎಸ್.ಹೆಚ್. ವಕೀಲರಿಂದಃ-**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

Sd/-

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ